ಆ) ಬಂದಿದೆ

ಇ) ಬಿಜಾಪುರ ಜಿಲ್ಲೆಯ 18 ಗ್ರಾಮಗಳಲ್ಲಿ ಹಾಗೂ ಒಂದು ಪಟ್ಟಣ ಪ್ರದೇಶದಲ್ಲಿ ಕುಡಿಯುವ ನೀರಿಗಾಗಿ ಸಂಕಷ್ಟ ಎದುರಿಸುತ್ತಿರುವುದರಿಂದ ಟ್ಯಾಂಕರ್‌ಗಳ ಮೂಲಕ ಕುಡಿಯುವ ನೀರನ್ನು ಸರಬರಾಜು ಮಾಡಲು ಕ್ರಮ ಕೈಗೊಳ್ಳಲಾಗಿದೆ

ಈ) ಇಲ್ಲ

ಉ) ಉದ್ಭವಿಸುವುದಿಲ್ಲ

1319 (2030) ಶ್ರೀ ಬಾಲರಾಜ್ ಎಸ್ (ಕೊಳ್ಳೇಗಾಲ) – ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ವಾಸಿಸುವ ಕಾಲೋನಿಗಳಲ್ಲಿ ಮದ್ಯದ ಅಂಗಡಿ ತೆರೆಯಲು ಯಾವ ಮಾನದಂಡಗಳ ಮೇಲೆ ಅನುಮತಿ ನೀಡಲಾಗುವುದು,

ಆ) ಅಬಕಾರಿ ಕಾಯ್ದೆಗೆ ವಿರುದ್ಧವಾಗಿ ಬೆಂಗಳೂರಿನ ಫ್ರೇಜರ್ ಟೌನ್‌ನಲ್ಲಿ ಮದ್ಯದ ಅಂಗಡಿ ತೆರೆಯಲು ಸನ್ನದು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ಬಂದಿದ್ದರೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಬಿ ಎಸ್ ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು)

ಅ) ಕರ್ನಾಟಕ ಅಬಕಾರಿ ಸನ್ನದುಗಳು (ಸಾಮಾನ್ಯ ಷರತ್ತುಗಳು) ನಿಯಮಗಳು 1967ರ ನಿಯಮ 5(1) ರನ್ವಯ ಉದ್ದೇಶಿತ ಸನ್ನದಿನ ಸ್ಥಳದಿಂದ 100 ಮೀಟರ್ ಅಂತರದಲ್ಲಿ ಪ್ರಧಾನವಾಗಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ವಾಸಿಸುವ ಕಾಲೋನಿಗಳಲ್ಲಿ ಮದ್ಯ ಮಾರಾಟ ಮಾಡಲು ಸನ್ನದು ಮಂಜೂರಾತಿಗೆ ಅವಕಾಶವಿರುವುದಿಲ್ಲ ಆದರೆ, ಇದೇ ನಿಯಮದ ಉಪ ನಿಯಮ (2)ರ ಷರತ್ತುವಿನ ಪ್ರಕಾರ ಡೆಪ್ಯುಟಿ ಕಮೀಷನರ್ ಆಫ್ ಎಕ್ಸ್ಸ್‌ರವರು ಅಬಕಾರಿ ಆಯುಕ್ತರ

ಪೂರ್ವಾನುಮತಿ ಪಡೆದು ಸಿಟಿ ಮುನಿಸಿಪಾಲಿಟಿ ಅಥವಾ ಸಿಟಿ ಕಾರ್ಪೋರೇಷನ್ ವ್ಯಾಪ್ತಿಯಲ್ಲಿ 50 ಮೀಟರ್ ಮೇಲೆ 100 ಮೀಟರ್ ಒಳಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಪ್ರಮುಖವಾಗಿ (predominently) ವಾಸಿಸುತ್ತಿರುವ ಸ್ಥಳಗಳಲ್ಲಿ ಮದ್ಯದ ಅಂಗಡಿಯನ್ನು ಮಂಜೂರು ಮಾಡಬಹುದಾಗಿರುತ್ತದೆ

ಆ) ಅಬಕಾರಿ ಕಾಯ್ದೆಗೆ ವಿರುದ್ಧವಾಗಿ ಫ್ರೇಜರ್ ಟೌನ್‌ನಲ್ಲಿ ಮದ್ಯದ ಅಂಗಡಿ ತೆರೆಯಲು ಸನ್ನದು ನೀಡಿರುವ ಯಾವುದೇ ಪ್ರಕರಣಗಳು ಇರುವುದಿಲ್ಲ

ಇ) ಈ ಪ್ರಶ್ನೆ ಉದ್ಭವಿಸುವುದಿಲ್ಲ

1321 (1318) ಶ್ರೀ ದೇಶಪಾಂಡೆ ಆರ್ ವಿ (ಹಲಿಯಾಳ್) – ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿಯಲ್ಲಿರುವ ಇಂಡಿಯನ್ ಪ್ಲೈವುಡ್ ಮ್ಯಾನುಫ್ಯಾಕ್ಚರಿಂಗ್ ಕಂಪನಿ ಲಿಮಿಟೆಡ್ ಹಾಗೂ ದಾಂಡೇಲಿ ಸ್ಟೀಲ್ ಆಂಡ್ ಫೆರೋ ಅಲಾಯ್ಸ್ ಕಂಪನಿಗಳು ರೋಗಗ್ರಸ್ತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಬಂದಿದ್ದಲ್ಲಿ, ರೋಗಗ್ರಸ್ತವಾಗಲು ಕಾರಣಗಳೇನು,

ಇ) ಈ ವಿಷಯವು ಬಿ ಐ ಎಫ್ ಆರ್ ಮುಂದಿದೆಯೇ,

ಈ) ಬಿ ಐ ಎಫ್ ಆರ್ ಮುಂದೆ ಇದ್ದರೆ, ಈ ಎರಡು ಕೈಗಾರಿಕೆಗಳ ಬಗ್ಗೆ ಏನು ಆದೇಶ ಮಾಡಿರುತ್ತಾರೆ,

ಉ) ಆ ಆದೇಶದ ಮೇಲೆ ರಾಜ್ಯ ಹಾಗೂ ಕೇಂದ್ರ ಸರ್ಕಾರ ಮತ್ತು ಹಣಕಾಸಿನ ಸಂಸ್ಥೆಗಳು ತೆಗೆದುಕೊಂಡ ಕ್ರಮಗಳೇನು,

ಊ) ಇಲ್ಲಿನ ನೌಕರರ ಭವಿಷ್ಯದ ಹಿತದೃಷ್ಟಿಯಿಂದ ಸದರಿ ಕೈಗಾರಿಕೆಗಳನ್ನು ಪುನಃಶ್ಚೇತನಗೊಳಿಸುವ ಬಗ್ಗೆ ಸರ್ಕಾರವು ತೆಗೆದುಕೊಂಡ ಕ್ರಮಗಳೇನು?